# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನಂ.ಸ.ಕಾ.ನಿ.ಅ./ಕೋ.ಉ.ವಿ/ಪಿ.ಆರ್/ 23 /2020-21

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ,
ಕೋರಮಂಗಲ ಉಪವಿಭಾಗ,
ಪಾಲಿಕೆ ಕಟ್ಟಡಗಳು, 2ನೇ ಅಡ್ಡರಸ್ತೆ,
5ನೇ ಬ್ಲಾಕ್, ಕೋರಮಂಗಲ,
ಬೆಂಗಳೂರು. ದಿನಾಂಕ: 13-01-2021

## -: ಸಭೆ ತಿಳುವಳಿಕೆ ಪತ್ರ :-

ವಿಷಯ :- ಆಡುಗೋಡಿ ವಾರ್ಡ್ ಸಂಖ್ಯೆ.147ರ ವಾರ್ಡ್ ಮಟ್ಟದ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಿರುವ ಬಗ್ಗೆ.

ಉಲ್ಲೇಖ:- ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಚೇರಿ ಆದೇಶದ ಪತ್ರ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ:21-09-2020.

* * * * *

ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಆದೇಶದ ರೀತ್ಯಾ ವಾರ್ಡ್ ಸಂಖ್ಯೆ.147(ಆಡುಗೋಡಿ) ವಾರ್ಡ್ ಸಮಿತಿ ಸಭೆಯನ್ನು ನೋಡಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ದಿನಾಂಕ:16.01.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಮಿತಿ ಸಭೆಯು ಬಿ.ಬಿ.ಎಂ.ಪಿ. ವಾಣಿಜ್ಯ ಸಂಕೀರ್ಣ, ಆಡುಗೋಡಿ, ಹೊಸೂರು ರಸ್ತೆ (ಕಾರ್ಯಪಾಲಕ ಅಭಿಯಂತರರ ಕಛೇರಿ) ಇಲ್ಲಿ ಜರುಗಲಿದ್ದು, ಸದರಿ ಸಭೆಗೆ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ತಪ್ಪದೇ ಹಾಜರಾಗಲು ಕೋರಿದೆ ಹಾಗೂ ಸಭೆಗೆ ಗೈರು ಹಾಜರಾಗುವ ಅಧಿಕಾರಿಗಳ ಹೆಸರನ್ನು ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದು.

<u>ಸಭೆಯಲ್ಲಿ ಚರ್ಚಿಸಬಹುದಾದ ವಿಷಯಗಳು:</u> 1) ಕೋವಿಡ್-19ರ ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ. 2) ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ. 3) ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ. 4) ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ. 5) ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ. 6) ಬೀದಿ ದೀಪಗಳ ನಿರ್ವಹಣೆ ಬಗ್ಗೆ. 7) ವಿದ್ಯುತ್ ಸರಬರಾಜು (ಬೆಸ್ಕಾಂ)ಗೆ ಸಂಬಂಧಿಸಿದ ವಿಷಯದ ಬಗ್ಗೆ ಹಾಗೂ ಇನ್ನಿತರೆ ವಿಷಯಗಳು ಅಧ್ಯಕ್ಷರ ಸೂಚನೆಯಂತೆ.

ಕಾರ್ಯದರ್ಶಿ, ವಾರ್ಡ್ ಸಮಿತಿ
ವಾರ್ಡ್ ಸಂಖ್ಯೆ 147, ಆಡುಗೋಡಿ

ರವರಿಗೆ,
ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು/
ವಾರ್ಡ್ ವ್ಯಾಪ್ತಿಯ ಬಡಾವಣೆಗಳ ನಿವಾಸಿಗಳಿಗೆ/
ಸಾರ್ವಜನಿಕ ಪ್ರಕಟಣೆ

ಪ್ರತಿಯನ್ನು:-

1. ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಅಧಿಕಾರಿಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್), ಕೋರಮಂಗಲ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
3. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್), ಆಡುಗೋಡಿ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಕೋರಮಂಗಲ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ವಿದ್ಯುತ್ ಸರಬರಾಜು ನಿಗಮ, ಕೋರಮಂಗಲ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಂದಾಯ ಅಧಿಕಾರಿಗಳು, ಕೋರಮಂಗಲ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ, ಬಿ.ಟಿ.ಎಂ.ಲೇಔಟ್ ವಿಭಾಗ, ಆಡುಗೋಡಿ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
8. ಪೊಲೀಸ್ ಇನ್ಸ್‌ಪೆಕ್ಟರ್ (ಟ್ರಾಫಿಕ್), ಆಡುಗೋಡಿ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
9. ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಬಿ.ಬಿ.ಎಂ.ಪಿ (ದಕ್ಷಿಣ), ಜಯನಗರ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
10. ಸಹಾಯಕ ನಿರ್ದೇಶಕರು, ತೋಟಗಾರಿಕೆ, ಬಿ.ಬಿ.ಎಂ.ಪಿ. (ದಕ್ಷಿಣ), ಜಯನಗರ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.

Scanned with CamScanner

Ward Committee Meeting Ward 147 Adugodi

Date:-

Day :- Saturday

DATE 16 01 2021

| Sl No | Name | Designation | Signature |
|---|---|---|---|
| 1 | Basavaraj. R. Kabade | Chairman | [signature] 16/1/21 |
| 2 | Manjula [Ex-Corporator] | Member | [signature] |
| 3 | Sampath. S (Ex. Corpt.) | Member | [signature] |
| 4 | A.M. Thyagaraju | Member | |
| 5 | V. Hemavathy | Member | |
| 6 | Rathnamma | Member | [signature] |
| 7 | Bhagyalakshmi. S. | member | |
| 8 | M. Gopal | Member | [signature] |
| 9 | B.D Nagaraju | Member | [signature] |
| 10 | Porapandiyan | Member | [signature] |
| 11 | Kemparaju | Member. | |
| 12. | Chandrashekar P. | Secretary | |

Scanned with CamScanner

Day :- Saturday

DATE 16 01 2021

Officials

| SL.NO | Name | Designation | Signature |
|---|---|---|---|
| 1 | DURGAPRASAD T.G. | J.H.T | Durgaprasad |
| 2 | Venkata Shivareddy | JE BESCOM | [signature] |
| 3 | Anil Kumar. S | A.E.E S(P) | [signature] |
| 4 | Ramesh | Forest | Ramesh |

Scanned with CamScanner

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಕೋರಮಂಗಲ ಉಪ-ವಿಭಾಗದ, ಆಡುಗೋಡಿ ವಾರ್ಡ್ ಸಂಖ್ಯೆ-147
## ದಿನಾಂಕ: 16-01-2021 ರಂದು ಜನವರಿ-2021 ಮಾಹೆಯ
## ವಾರ್ಡ್ ಸಮಿತಿ ಸಭೆಯ ನಡವಳಿಗಳು

ಶ್ರೀ ಬಸವರಾಜ್ ಕಬಾಡೆ, ಅಧೀಕ್ಷಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 147ರ ರವರ ಅಧ್ಯಕ್ಷತೆಯಲ್ಲಿ ಬಿ.ಬಿ.ಎಂ.ಪಿ ವಾಣಿಜ್ಯ ಸಂಕೀರ್ಣ, (ಕಾರ್ಯಪಾಲಕ ಅಭಿಯಂತರರ ಕಛೇರಿ) ಆಡುಗೋಡಿಯಲ್ಲಿ ದಿನಾಂಕ: 16.01.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು:

**ಹಾಜರಿದ್ದ ಸದಸ್ಯರು:-**

1. ಶ್ರೀ ಮಂಜುಳ
2. ಶ್ರೀ ಸಂಪತ್
3. ಶ್ರೀ ಎಂ. ಗೋಪಾಲ್
4. ಶ್ರೀ ಬಿ.ಡಿ. ನಾಗರಾಜು
5. ಶ್ರೀ ಪಾಂಡಿಯನ್

**ಹಾಜರಿದ್ದ ಅಧಿಕಾರಿಗಳು:-**

1. ಶ್ರೀ ಚಂದ್ರಶೇಖರ್ .ಪಿ, ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು, ವಾರ್ಡ್-147, ಆಡುಗೋಡಿ
2. ಶ್ರೀ ದುರ್ಗಾ ಪ್ರಸಾದ್, ಕಿರಿಯ ಆರೋಗ್ಯ ಪರಿವೀಕ್ಷಕರು
3. ಶ್ರೀ ವೆಂಕಟ ಶಿವರೆಡ್ಡಿ, ಕಿರಿಯ ಅಭಿಯಂತರರು, ಬೆಸ್ಕಾಂ
4. ಶ್ರೀ ಅನಿಲ್ ಕುಮಾರ್ .ಎಸ್, ಸಹಾಯಕ ಕಾರ್ಯಪಾಲಕ ಅಭಿಯಂತರರು
5. ಶ್ರೀ ರಮೇಶ್, ಅರಣ್ಯ ಇಲಾಖೆ, ಬಿ.ಬಿ.ಎಂ.ಪಿ.

* * * * *

ಶ್ರೀ ಬಸವರಾಜ್ ಕಬಾಡೆ, ಅಧೀಕ್ಷಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 147 ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳನ್ನು ಹಾಗೂ ವಾರ್ಡ್‌ನ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು ಮತ್ತು ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳು, ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲು ತಿಳಿಸಿದರು.

ಶ್ರೀ ಬಸವರಾಜ್ ಕಬಾಡೆ, ಅಧೀಕ್ಷಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ರವರು ಮಾತನಾಡಿ, ಆಡುಗೋಡಿ ವ್ಯಾಪ್ತಿಯಲ್ಲಿನ ಖಾಲಿ ನಿವೇಶನದಲ್ಲಿ ಬ್ಲಾಕ್‌ಸ್ಪಾಟ್‌ಗಳನ್ನು ತಡೆಗಟ್ಟುವ ಉದ್ದೇಶದಿಂದ ಹಾಗೂ ನಿವೇಶನದ ಮಾಲೀಕರುಗಳನ್ನು ಪತ್ತೆ ಹಚ್ಚುವ ದೃಷ್ಟಿಯಿಂದ ಖಾಲಿ ನಿವೇಶನಗಳ ಮುಂದೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸ್ವತ್ತು ಎಂಬ ನಾಮಫಲಕಗಳನ್ನು ಅಳವಡಿಸಲು ಸೂಚಿಸಿದರು.

ಶ್ರೀ ಬಿ.ಡಿ. ನಾಗರಾಜು ರವರು ಮಾತನಾಡಿ, ಚಾಮುಂಡೇಶ್ವರಿ ಉದ್ಯಾನವನ, ಅಂಬೇಡ್ಕರ್ ಉದ್ಯಾನವನ ಮತ್ತು 7ನೇ ಬ್ಲಾಕ್ ಉದ್ಯಾನವನಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು, ಉದ್ಯಾನವನಗಳನ್ನು ಅಭಿವೃದ್ಧಿಗೊಳಿಸಬೇಕೆಂದು ತಿಳಿಸಿದರು.

ಶ್ರೀ ಗೋಪಾಲ್ ರವರು ಮಾತನಾಡಿ, ಆಂಜನೇಯ ದೇವಸ್ಥಾನದ ರಸ್ತೆಯಲ್ಲಿ ಡೆಬ್ರಿಸ್‌ಗಳನ್ನು ತೆರವುಗೊಳಿಸಬೇಕೆಂದು ತಿಳಿಸಿದರು.



Scanned with CamScanner

ಶ್ರೀ ಪಾಂಡಿಯನ್ ರವರು ಮಾತನಾಡಿ, 7ನೇ ಮುಖ್ಯರಸ್ತೆ ಮತ್ತು 1ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, 9ನೇ ಅಡ್ಡರಸ್ತೆ ಮತ್ತು 13ನೇ ಅಡ್ಡರಸ್ತೆಗಳಲ್ಲಿ ರಸ್ತೆ ಚರಂಡಿಯಲ್ಲಿನ ಹೂಳನ್ನು ತೆರವುಗೊಳಿಸಬೇಕೆಂದು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಸಭೆಯಲ್ಲಿ ಹಾಜರಿದ್ದ ವಾರ್ಡ್‌ನ ಅಭಿಯಂತರರು ಮಾತನಾಡಿ, ಹೂಳನ್ನು ತೆರವುಗೊಳಿಸಲು ಸ್ಥಳಪರಿಶೀಲಿಸಲಾಗಿದ್ದು, ಕಾಮಗಾರಿಯನ್ನು ಪ್ರಾರಂಭ ಮಾಡಲು ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸಲಾಗಿರುತ್ತದೆ ಹಾಗೂ ವಾರ್ಡ್-147 ಸಮಿತಿ ಸಭೆಯ ಸದಸ್ಯರಾದ ಶ್ರೀ ಪಾಂಡಿಯನ್ ರವರ ಸಮ್ಮುಖದಲ್ಲಿ ನಡೆದಿರುತ್ತದೆ.

ಶ್ರೀ ಪಾಂಡಿಯನ್ ರವರು ಮಾತನಾಡಿ, ರಾಜೇಂದ್ರನಗರ, ಪಾಸ್‌ಪೋರ್ಟ್ ಕಛೇರಿ ಬಳಿ ವಿದ್ಯುತ್ ಕಂಬವು ಚರಂಡಿಯ ಒಳಗೆ ಇದ್ದು, ಅದನ್ನು ರಸ್ತೆ ಬದಿಗೆ ವಿದ್ಯುತ್ ಕಂಬವನ್ನು ಸ್ಥಳಾಂತರಗೊಳಿಸಬೇಕೆಂದು ತಿಳಿಸಿದರು.

ಶ್ರೀ ಬಿ.ಡಿ. ನಾಗರಾಜು ರವರು ಮಾತನಾಡಿ, 8ನೇ ಬ್ಲಾಕ್‌ನಲ್ಲಿನ ಚಾಮುಂಡೇಶ್ವರಿ ಉದ್ಯಾನವನದಲ್ಲಿ ವಿದ್ಯುತ್ ಕಂಬಗಳನ್ನು ಅಳವಡಿಸಬೇಕೆಂದು ತಿಳಿಸಿದರು.

ಶ್ರೀ ಪಾಂಡಿಯನ್ ರವರು ಮಾತನಾಡಿ, ರಾಜೇಂದ್ರನಗರದಲ್ಲಿ ಕೆಲವು ವಿದ್ಯುತ್ ಕಂಬಗಳು ಬಾಗಿರುತ್ತದೆ. ಆದುದರಿಂದ ಬೆಸ್ಕಾಂ ರವರು ವಿದ್ಯುತ್ ಕಂಬಗಳನ್ನು ಸರಿಪಡಿಸಬೇಕೆಂದು ತಿಳಿಸಿದರು.

ರಸ್ತೆ ಬದಿಯಲ್ಲಿರುವ ರಸ್ತೆ ದೀಪಗಳನ್ನು ನಿಯಮಿತವಾಗಿ ಪರಿಶೀಲನೆ ಮಾಡುವುದು ಹಾಗೂ ಹದಗೆಟ್ಟಿರುವ ರಸ್ತೆ ದೀಪಗಳನ್ನು ಸರಿಪಡಿಸಬೇಕೆಂದು ತಿಳಿಸಿದರು.

ಶ್ರೀ ಪಾಂಡಿಯನ್ ರವರು ಮಾತನಾಡಿ, ಪೌರ ಕಾರ್ಮಿಕರಿಗೆ Push Carts ಗಳನ್ನು ನೀಡಬೇಕೆಂದು ತಿಳಿಸಿದರು.

ಕೊನೆಯದಾಗಿ ಸದಸ್ಯ ಕಾರ್ಯದರ್ಶಿಗಳು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳಿಗೆ ವಂದನೆಯನ್ನು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಮುಂದಿನ ಸಭೆಯಲ್ಲಿ ಪೂರ್ಣ ಮಾಹಿತಿಯನ್ನು ಒದಗಿಸಬೇಕೆಂದು ಕಾರ್ಯದರ್ಶಿ ಮತ್ತು ಇಲಾಖಾ ಅಧಿಕಾರಿಗಳಿಗೆ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ ಚಂದ್ರಶೇಖರ್ .ಪಿ)
ಸದಸ್ಯ ಕಾರ್ಯದರ್ಶಿ
ಹಾಗೂ ಕಿರಿಯ ಅಭಿಯಂತರರು,
ವಾರ್ಡ್-147 ಆಡುಗೋಡಿ ವಿಭಾಗ

(ಶ್ರೀ ಬಸವರಾಜ್ ಕಬಾಡೆ)
ನೋಡಲ್ ಅಧಿಕಾರಿಗಳು
ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್-147, ಆಡುಗೋಡಿ



Scanned with CamScanner

16/01/2021





Scanned with CamScanner